೭೬

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 422 (564) |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 11.12.2025 |
| ಉತ್ತರಿಸುವ ಸಚಿವರು | : | ಸನ್ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದಿಂದ ಪರಿಶಿಷ್ಟ ಪಂಗಡಗಳ ಜನರು ಹೆಚ್ಚಾಗಿ ವಾಸಿಸುವ ಪ್ರದೇಶದಲ್ಲಿನ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ವಿವಿಧ ಯೋಜನೆಗಳಾವುವು; | ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಲ್ಲಿ ಸಿ.ಸಿ ರಸ್ತೆ, ಚರಂಡಿ ನಿರ್ಮಾಣ, ಕುಡಿಯುವ ನೀರು, ಸಮುದಾಯ ಭವನಗಳ ನಿರ್ಮಾಣ ಇತ್ಯಾದಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. |
| ಆ) | ಸದರಿ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಎಷ್ಟು ಮೊತ್ತವನ್ನು ಮೀಸಲಿರಿಸಲಾಗಿದೆ; | 2025-26ನೇ ಸಾಲಿನಲ್ಲಿ ಪ್ರಗತಿ ಕಾಲೋನಿ ಯೋಜನೆಯಡಿ ರೂ.71.96 ಕೋಟಿ ಹಾಗೂ ವಾಲ್ಮೀಕಿ/ಸಮುದಾಯ ಭವನ ನಿರ್ಮಾಣಕ್ಕಾಗಿ ರೂ.25.00 ಕೋಟಿಗಳನ್ನು ಒದಗಿಸಿಕೊಳ್ಳಲಾಗಿದೆ. |
| ಇ) | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿಗೆ ಪ್ರಸಕ್ತ ಸಾಲಿನಲ್ಲಿ ಪರಿಶಿಷ್ಟ ಪಂಗಡಗಳ ಜನರು ಹೆಚ್ಚಾಗಿ ವಾಸಿಸುವ ಪ್ರದೇಶದಲ್ಲಿನ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಹಣ ಬಿಡುಗಡೆಗೊಳಿಸಲಾಗಿದೆ; (ಪೂರ್ಣ ವಿವರಗಳನ್ನು ಒದಗಿಸುವುದು) | ಪ್ರಸಕ್ತ ಸಾಲಿನಲ್ಲಿ ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುದಾನದ ಲಭ್ಯತೆಗನುಗುಣವಾಗಿ ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು. |
| ಈ) | ಪರಿಶಿಷ್ಟ ಪಂಗಡಗಳ ಜನರು ಹೆಚ್ಚಾಗಿ ವಾಸಿಸುವ ಪ್ರದೇಶದಲ್ಲಿನ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅನುಮೋದನೆಗೊಂಡು ಬಾಕಿಯಿರುವ ಕಾಮಗಾರಿಗಳಾವುವು? (ವಿವರವನ್ನು ನೀಡುವುದು) | ರಾಯಚೂರು ಜಿಲ್ಲೆಯ ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪರಿಶಿಷ್ಟ ಪಂಗಡಗಳ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುಮೋದನೆಗೊಂಡ ಕಾಮಗಾರಿಗಳು ಬಾಕಿಯಿರುವುದಿಲ್ಲ. |

STW/SECB/STC/243/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ